# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 63 | Pages. 2 | Date: 05-02-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 63 - ಪುಟಗಳು : 2 | 05-02-2026 | ಗುರುವಾರ | Ph: 8762954248 | ದರ : ₹1


# ಹೆಣ್ಣುಮಕ್ಕಳನ್ನು ಕ್ಯಾನ್ಸರ್ ನಿಂದ ರಕ್ಷಿಸಲು ಲಸಿಕೆ ಕೊಡಿಸಿ

## ಪ್ರಸೂತಿ ತಜ್ಞರ ಸಂಘದ ಅಧ್ಯಕ್ಷೆ ಡಾ. ಪ್ರೇಮಲತಾ | ಪತ್ರಕರ್ತರ ಸಂಘದಿಂದ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಗರ್ಭಾಶಯ ಕೊರಳ ಕ್ಯಾನ್ಸರ್‌ನಿಂದ ಮಹಿಳೆಯರನ್ನು ಕಾಪಾಡಲು ವ್ಯಾಕ್ಸಿನ್ ಲಭ್ಯವಿದ್ದು, 9 ರಿಂದ 14 ವರ್ಷದೊಳಗಿನ ಮಕ್ಕಳಿಗೆ ನೀಡುವ ಮೂಲಕ ಖಾಯಿಲೆಯಿಂದ ದೂರವಿರಬಹುದು ಎಂದು ಜಿಲ್ಲಾ ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞರ ಸಂಘದ ಅಧ್ಯಕ್ಷೆ ಡಾ. ಪ್ರೇಮಲತಾ ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಬುಧವಾರ ರಾಧಮ್ಮ ಜನ ಸ್ಪಂದನ ದಿವಾಕರ ಸೇವಾ ಪ್ರತಿಷ್ಠಾನ, ಹೆಚ್‌ಡಿಆರ್ ಹೆಲ್ತ್ ಕೇರ್ ಫೌಂಡೇಶನ್ ಹಾಗೂ ಜಿಲ್ಲಾ ಸ್ತ್ರೀ ರೋಗ ಹಾಗು ಪ್ರಸೂತಿ ತಜ್ಞರ ಸಂಘದಿಂದ ಹಮ್ಮಿಕೊಂಡಿದ್ದ ಹೆಚ್.ಪಿ.ವಿ. ಲಸಿಕೆ ಹಾಕುವ ಹಾಗೂ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಮೂರು ಸಾವಿರ ಮಕ್ಕಳಿಗೆ ಹೆಚ್.ಪಿ.ವಿ. ಲಸಿಕೆ ಹಾಕಲಾಗಿದೆ. ಗರ್ಭಾಶಯ ಕೊರಳ ಕ್ಯಾನ್ಸರ್ ಚಿಕಿತ್ಸೆಗಾಗಿ ಜನರು ವೈದ್ಯರ ಬಳಿ ಬರುವುದಿಲ್ಲ. ಒಂದು ವೇಳೆ ಬಂದರೂ ಲಸಿಕೆಗೆ ಖರ್ಚಾಗುವ ದುಡ್ಡು ಎಷ್ಟು ಎಂದು ಮೊದಲೇ ಕೇಳುತ್ತಾರೆ. ಈ ರೀತಿಯ ನಿರ್ಲಕ್ಷ್ಯದಿಂದ ಲಸಿಕೆ ಪಡೆಯುತ್ತಿರುವವರ ಸಂಖ್ಯೆ ದೇಶದಲ್ಲಿ ಶೇ. 3ಕ್ಕಿಂತ ಕಡಿಮೆ ಇದೆ ಎಂದರು.

ವಿದೇಶಗಳಲ್ಲಿ ಈ ಕಾಯಿಲೆ ಕುರಿತು ಎಚ್ಚರಿಕೆ ವಹಿಸುತ್ತಾರೆ. ಆದರೆ ನಮ್ಮ ದೇಶದಲ್ಲಿ ಇನ್ನಷ್ಟು ಕೆಲಸಗಳಾಗಬೇಕಿದೆ. ಸರ್ಕಾರವೂ ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಂಡಿದೆ. ಸಾರ್ವತ್ರಿಕವಾಗಿ ಲಸಿಕೆ ನೀಡುವ ಉದ್ದೇಶದಿಂದ ತರಬೇತಿ ಕಾರ್ಯಕ್ರಮ ನಡೆಯುತ್ತಿದೆ ಎಂದರು. 9 ರಿಂದ 14 ವರ್ಷದೊಳಗಿನ ಮಕ್ಕಳಿಗೆ ಆರು ತಿಂಗಳಲ್ಲಿ ಮೂರು ಡೋಸ್ ಲಸಿಕೆ ಹಾಕಬೇಕಾಗುತ್ತದೆ. ಮದುವೆಗಿಂತ ಮೊದಲು ಲಸಿಕೆ ಹಾಕಿಸಿಕೊಂಡರೆ ಪರಿಣಾಮಕಾರಿಯಾಗಿರುತ್ತ ದೆ. ಸ್ಕ್ರೀನಿಂಗ್ ಹಾಗೂ ಪ್ಯಾಪ್ ಸ್ಮಿಯರ್ ಪರೀಕ್ಷೆಗೆ ಒಳಪಡುವುದರಿಂದ ಕ್ಯಾನ್ಸರ್ ಲಕ್ಷಣಗಳನ್ನು ಪತ್ತೆ ಹಚ್ಚಬಹುದು. ಎಲ್ಲರ ಆರೋಗ್ಯದಲ್ಲಿ ಈ ಖಾಯಿಲೆಯ ಗುಣ ಲಕ್ಷಣಗಳಿರುತ್ತವೆ.

> ಆರೋಗ್ಯದ ಬಗ್ಗೆ ಎಲ್ಲರೂ ಕಾಳಜಿ ವಹಿಸಬೇಕು. ಹಣಕ್ಕಿಂತ ಆರೋಗ್ಯ ಮುಖ್ಯ ಎಂಬುದನ್ನು ಜನರು ಅರಿಯಬೇಕು. ಈ ಬಾರಿ ರಾಧಮ್ಮ ಜನಸ್ಪಂದನ ಸಂಸ್ಥೆ ಹೆಚ್.ಪಿ.ವಿ. ಲಸಿಕೆಗೆ ಆರ್ಥಿಕ ನೆರವು ನೀಡಿದೆ. ಮುಂದಿನ ವರ್ಷದಿಂದ ನಮ್ಮ ಸಂಘದಿಂದಲೇ ಕಾರ್ಯಕ್ರಮ ನಡೆಸಲಾಗುವುದು.
>
> **- ಜೆ.ಆರ್.ಕೆಂಚೇಗೌಡ, ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ**



ರೋಗದ 16 ಮತ್ತು 18ನೇ ಜಾತಿ ಶೇ. 80 ರಷ್ಟು ಮಹಿಳೆಯರನ್ನು ಬಾಧಿಸುತ್ತದೆ. ಗರ್ಭಾಶಯ ಕ್ಯಾನ್ಸರ್ ಪತ್ತೆಯಾಗಲು 10 ರಿಂದ 15 ವರ್ಷ ಸಮಯ ತೆಗೆದುಕೊಳ್ಳುತ್ತದೆ. ನಿರ್ಲಕ್ಷ್ಯ ವಹಿಸದೆ ಮಹಿಳೆಯರು ನಿಗದಿತ ತಪಾಸಣೆಗೆ ಒಳಪಡಬೇಕೆಂದು ಸಲಹೆ ನೀಡಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಹೆಚ್.ಪಿ.ವಿ. ಲಸಿಕೆಗೆ ಹೆಚ್ಚು ಹಣ ಖರ್ಚಾಗುತ್ತದೆಂದು ಪೋಷಕರು ಮಕ್ಕಳಿಗೆ ಲಸಿಕೆ ನೀಡಲು ಹಿಂದೇಟು ಹಾಕುತ್ತಾರೆ. ಆರೋಗ್ಯಕ್ಕಿಂತ ಹಣ ಮುಖ್ಯವಲ್ಲ ಎಂಬ ಅರಿವು ಮೂಡಬೇಕು. ರಾಧಮ್ಮ ಜನ ಸ್ಪಂದನ ಸಂಸ್ಥೆಯು ಪತ್ರಕರ್ತರ ಮಕ್ಕಳಿಗೆ ಉಚಿತವಾಗಿ ಲಸಿಕೆ ವ್ಯವಸ್ಥೆ ಮಾಡಿರುವುದು ಶ್ಲಾಘನೀಯ.

ಸಂಸ್ಥೆಯ ಹೇಮಂತ್ ಅವರ ತಾಯಿಯ ಹೆಸರಿನಲ್ಲಿ ಬಡಮಕ್ಕಳಿಗೆ ಪುರಸ್ಕಾರ ಸೇರಿ ಅನೇಕ ಸಮಾಜಪರ ಕೆಲಸಗಳ ಮೂಲಕ ಎಲ್ಲರಿಗೂ ಚಿರಪರಿಚಿತರಾಗಿದ್ದಾರೆ ಎಂದರು.

ರಾಧಮ್ಮ ಜನ ಸ್ಪಂದನ ಸಂಸ್ಥೆ ಮುಖ್ಯಸ್ಥ ಹೇಮಂತ್ ಮಾತನಾಡಿ, ಗ್ರಾಮೀಣ ಪ್ರದೇಶದ ಅನೇಕರಿಗೆ ಕ್ಯಾನ್ಸರ್ ಬಗ್ಗೆ ಮಾಹಿತಿಯೇ ಇಲ್ಲ. 30 ರಿಂದ 35 ವಯಸ್ಸಿಗೆ ಮಹಿಳೆಯರು ಖಾಯಿಲೆಯಿಂದ ಸಾವನ್ನಪ್ಪುತ್ತಿರುವುದು ವಿಷಾದದ ಸಂಗತಿ. ಸರ್ಕಾರವೇ ಮುತುವರ್ಜಿ ವಹಿಸಿ ರಾಜ್ಯಾದ್ಯಂತ ಲಸಿಕೆ ನೀಡುವ ಯೋಜನೆ ಘೋಷಿಸಬೇಕೆಂದು ಆಗ್ರಹಿಸಿದರು.

ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು, ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷೆ ಚೈತ್ರಾ ನಾಯಕರಹಳ್ಳಿ, ಪತ್ರಕರ್ತರ ಸಂಘದ ಪದಾಧಿಕಾರಿಗಳು ಹಾಜರಿದ್ದರು. ಸಂಘದ ಕಾರ್ಯದರ್ಶಿ ಹರೀಶ್ ಕಾರ್ಯಕ್ರಮ ನಿರೂಪಿಸಿದರು. ನಗರದ ಪತ್ರಕರ್ತರ ಹೆಣ್ಣು ಮಕ್ಕಳಿಗೆ ಹೆಚ್.ಪಿ.ವಿ. ಲಸಿಕೆ ನೀಡಲಾಯಿತು.


### ವಿದೇಶಿಗರಲ್ಲಿ ಆರೋಗ್ಯ ಜಾಗೃತಿ ಹೆಚ್ಚು

ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞೆ ಡಾ. ಎ.ಸಾವಿತ್ರಿ ಮಾತನಾಡಿ, ಈ ಗಂಭೀರ ಕಾಯಿಲೆ ಕೇವಲ ಮಹಿಳೆಯರು ಮಾತ್ರವಲ್ಲದೆ ಪುರುಷರಲ್ಲೂ ಕಾಣಿಸಿಕೊಳ್ಳುತ್ತದೆಯಾದರೂ ಹರಡುವಿಕೆ ಪ್ರಮಾಣ ಹೆಚ್ಚಿರುತ್ತದೆ. ಅಸುರಕ್ಷಿತ ಲೈಂಗಿಕ ಕ್ರಿಯೆಯೇ ಗರ್ಭಾಶಯ ಕೊರಳ ಕ್ಯಾನ್ಸರ್‌ಗೆ ಮೂಲ ಕಾರಣ. ಆದ್ದರಿಂದ ಸಾಕಷ್ಟು ಜಾಗೃತಿ ವಹಿಸಬೇಕು. ದೇಶದಲ್ಲಿ ಒಂದು ವರ್ಷಕ್ಕೆ 1.27 ಲಕ್ಷ ಹೊಸ ಪ್ರಕರಣಗಳು ಪತ್ತೆಯಾಗಿವೆ. ಅದರಲ್ಲಿ 79 ಸಾವಿರ ಮಹಿಳೆಯರು ಮೃತಪಟ್ಟಿದ್ದಾರೆಂದು ಮಾಹಿತಿ ನೀಡಿದರು.

ನಮ್ಮ ದೇಶದಲ್ಲಿ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಹೆಚ್ಚಿದೆ. ಏನಾದರೂ ನೋವು ಕಾಣಿಸಿಕೊಂಡಾಗ ಮಾತ್ರ ಆಸ್ಪತ್ರೆಗೆ ಭೇಟಿ ನೀಡುತ್ತಾರೆ. ಹೊರ ದೇಶಗಳಲ್ಲಿ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಕಡ್ಡಾಯವಾಗಿರುವುದರಿಂದ ಹೆಚ್.ಪಿ.ವಿ. ಲಸಿಕೆಯನ್ನು ಎಲ್ಲರೂ ಕಡ್ಡಾಯವಾಗಿ ಹಾಕಿಸಿಕೊಳ್ಳುತ್ತಾರೆ. ಹೀಗಾಗಿ ಅಲ್ಲಿ ಮರಣ ಪ್ರಮಾಣ ಕಡಿಮೆ ಎಂದರು.

ಜಿಲ್ಲೆಯಲ್ಲಿ ವಿವಾಹ ಪೂರ್ವ ಗರ್ಭಿಣಿ ಪ್ರಕರಣಗಳು ಹೆಚ್ಚುತ್ತಿದ್ದು ಗರ್ಭಾಶಯ ಕೊರಳ ಕ್ಯಾನ್ಸರ್ ಪ್ರಮಾಣ ಮುಂದಿನ ದಿನಗಳಲ್ಲಿ ಹೆಚ್ಚಾಗುತ್ತದೆ. ಪೋಷಕರು ತಮ್ಮ ಮಕ್ಕಳ ಮೇಲೆ ಗಮನ ಹರಿಸಬೇಕು. ವಿದ್ಯಾಭ್ಯಾಸದ ಹೊರತಾಗಿ ಮಕ್ಕಳು ಅನ್ಯ ಚಟುವಟಿಕೆಗಳಲ್ಲಿ ತೊಡಗದಂತೆ ನಿಗಾ ವಹಿಸಬೇಕೆಂದು ಸಲಹೆ ನೀಡಿದರು.

# ಭಾರತೀಯ ಸಂಸ್ಕೃತಿಗೆ ವಿಶ್ವ ಮಾನ್ಯತೆ ತಂದುಕೊಟ್ಟ ವಿವೇಕಾನಂದ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಭಾರತದ ಶ್ರೇಷ್ಠ ಸಂಸ್ಕೃತಿ ಮತ್ತು ಪರಂಪರೆಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗೌರವ ತಂದುಕೊಟ್ಟವರು ಸ್ವಾಮಿ ವಿವೇಕಾನಂದರು ಎಂದು ಬೆಂಗಳೂರಿನ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ತಿಳಿಸಿದರು.

ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಹಿಂದು ಸಮಾಜೋತ್ಸವದಲ್ಲಿ ಆಶೀರ್ವಚನ ನೀಡಿದ ಅವರು, ವಿವೇಕಾನಂದರ ತತ್ವ, ಸಿದ್ಧಾಂತ, ದೇಶಪ್ರೇಮ ಎಂದೆಂದಿಗೂ ಯುವಕರಿಗೆ ಮಾದರಿಯಾಗಿದೆ. ಈ ದೇಶವನ್ನು ಸದೃಢಗೊಳಿಸುವಲ್ಲಿ ಅನೇಕ ಸಾಧು, ಸಂತರು ನಡೆಸಿದ ಅವಿರತ ಶ್ರಮ ಸ್ಮರಣೀಯವಾಗಿದೆ. ಮೌಲ್ಯಯುತವಾದ ಸನಾತನ ಧರ್ಮವನ್ನು ರಕ್ಷಿಸಿ, ಪೋಷಿಸುವ ಹೊಣೆ ನಮ್ಮೆಲ್ಲರ ಕರ್ತವ್ಯ. ದೇಶಪ್ರೇಮ ಬೆಳೆಸಿಕೊಳ್ಳುವ ಜತೆಗೆ ನೆಲದ ಕಾನೂನನ್ನು ಗೌರವಿಸಬೇಕು ಎಂದರು.

ಆರ್‌ಎಸ್‌ಎಸ್ ಕ್ಷೇತ್ರಿಯ ಸಂಪರ್ಕ ಪ್ರಮುಖ್ ಟಿ.ಎಸ್. ವೆಂಕಟೇಶ್ ಮಾತನಾಡಿ, ಹಿಂದು ಎಂದರೆ ನಾವೆಲ್ಲರೂ ಒಂದು ಎನ್ನುವ ಆತ್ಮಮನೋಭಾವ ಈ ರಾಷ್ಟ್ರದ ನೆಲೆಗಟ್ಟಿನ ಪ್ರತಿಯೊಬ್ಬರಲ್ಲೂ ಬೇರೂರಬೇಕು. ನೆಲ, ಜಲ, ಗಡಿ ವಿವಾದಗಳಿಗೆ ನಮ್ಮ ನಮ್ಮಲ್ಲೇ ಆಂತರಿಕ ಕಚ್ಚಾಟ ಸಾಕು. ಜಾತಿ, ಭಾಷೆ , ಸಂಪ್ರದಾಯ ಇವುಗಳ ವಿಂಗಡಣೆ ಸಾಕು. ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಶತಮಾನೋತ್ಸವ ಆಚರಿಸುತ್ತಿರುವ ಪ್ರಯುಕ್ತ ಸಮಾಜಿಕ ಪರಿಕಲ್ಪನೆ ಇರಿಸಿ ಕಾರ್ಯ ರೂಪಿಸಿದೆ. ಪಂಚ ಪರಿವರ್ತನೆ ಎಂಬ ಸಾಮಾಜಿಕ ಸಾಮರಸ್ಯ, ಕುಟುಂಬ ಪ್ರಬೋಧನ, ಪರಿಸರ ಸಂರಕ್ಷಣೆ, ಸ್ವದೇಶಿತನ ಹಾಗೂ ನಾಗರಿಕ ಕರ್ತವ್ಯ ಎಂಬ ಅಂಶಗಳ ಕಾರ್ಯಸೂಚಿ ಅನುಸರಿಸಿ ಧನಾತ್ಮಕ ಬದಲಾವಣೆಗೆ ಪ್ರಯತ್ನ ನಡೆಸಲಾಗುವುದು ಎಂದರು.

ಆರ್‌ಎಸ್‌ಎಸ್ ಸಂಘಟಕ ಹೊ.ಸು.ರಮೇಶ್, ಪದಾಧಿಕಾರಿಗಳಾದ ಅನುಪಮ ನಿಲೇಶ್ ಮತ್ತಿತರರಿದ್ದರು.

# ಮಹಿಳೆಯರ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿ: ಕೆಐಓಸಿ ತಂಡ ಗೆಲುವು





**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಟೈಮ್ಸ್ ಸ್ಪೋರ್ಟ್ಸ್ ಅಕಾಡೆಮಿ ಹಾಗೂ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ವತಿಯಿಂದ ನಡೆದ ಟೈಮ್ಸ್ ಕಪ್ ಸೀಸನ್ 2ನೇ ರಾಜ್ಯ ಮಟ್ಟದ ಯುವತಿಯರ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಬೆಂಗಳೂರಿನ ಕೆಐಓಸಿ ತಂಡ ಪ್ರಥಮ ಬಹುಮಾನ ಪಡೆದುಕೊಂಡಿದೆ. ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಈಚೆಗೆ ನಡೆದ ಪಂದ್ಯಾವಳಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಎಂಟು ಮಹಿಳಾ ತಂಡಗಳು ಭಾಗವಹಿಸಿದ್ದವು.

ಅಂತಿಮ ಹಣಾಹಣಿಯಲ್ಲಿ ಬೆಂಗಳೂರಿನ ಕೆಐಓಸಿ ತಂಡ ಹಾಗೂ ಗೋಲ್ಡನ್ ರಾಯ್ ತಂಡಗಳ ನಡುವೆ ಸೆಣಸಾಟ ನಡೆಸಿ ಅಂತಿಮವಾಗಿ ಬೆಂಗಳೂರಿನ ತಂಡಗಳಾದ ಕೆಐಓಸಿ ಪ್ರಥಮ ಹಾಗೂ ದ್ವಿತೀಯ ಬಹುಮಾನವನ್ನ ರಾಯ್ ತಂಡ ಪಡೆದುಕೊಂಡಿತು. ಒಟ್ಟು ಆರು ದಿನಗಳ ಕಾಲ ಈ ಕ್ರೀಡಾಕೂಟ ನಡೆದಿದ್ದು, ಬಂದಿದ್ದ ಎಲ್ಲಾ ತಂಡಗಳ ಆಟಗಾರರಿಗೆ ವಸತಿ ಹಾಗೂ ಇನ್ನಿತರ ವ್ಯವಸ್ಥೆಯನ್ನು ಟೈಮ್ಸ್ ಅಕಾಡೆಮಿ ಹಾಗೂ ರೋಟರಿ ಸಹಯೋಗದಲ್ಲಿ ಮಾಡಲಾಗಿತ್ತು. ಕ್ರೀಡಾಕೂಟಕ್ಕೆ ಚಾಲನೆ ನೀಡಿದ ರೋಟರಿ ಜೋನ್ 9ರ ಸಹಾಯಕ ಗವರ್ನರ್ ಜಿ.ಎನ್. ಮಂಜುನಾಥ್ ಮಾತನಾಡಿ, ಮಹಿಳೆಯರ ಕ್ರಿಕೆಟ್ ಇಂದು ಹೆಚ್ಚು ಜನರನ್ನು ಆಕರ್ಷಿಸುತ್ತಿದ್ದು, ಪುರಷರ ಕ್ರೀಡಾಕೂಟಕ್ಕೆ ಸಿಗುವಷ್ಟು ಜನಮೆಚ್ಚುಗೆಯನ್ನು ಮಹಿಳೆಯರ ಕ್ರಿಕೆಟ್ ಪಡೆದುಕೊಳ್ಳುತ್ತಿದೆ. ಕ್ರಿಕೆಟ್ ಕ್ರೀಡಾಕೂಟದಲ್ಲಿ ಇರುವ ಯುವತಿಯರಿಗೆ ಮುಂದಿನ ದಿನಗಳಲ್ಲಿ ಸಾಕಷ್ಟು ಅವಕಾಶಗಳು ಇದ್ದು, ತಮ್ಮ ಪ್ರತಿಭೆ ಹೊರಹಾಕಲು ಈ ಕ್ರೀಡಾಕೂಟ ಸೂಕ್ತ ವೇದಿಕೆಯಾಗಿದೆ. ಇಂತಹ ಪಂದ್ಯಾವಳಿಯನ್ನು ನಡೆಸುವುದರಿಂದ ಸ್ಥಳೀಯ ಉತ್ತಮ ಕ್ರೀಡಾಪಟುಗಳನ್ನು ಗುರುತಿಸಲು ಸಾಧ್ಯವಾಗುತ್ತದೆ ಎಂದರು. ಟೈಮ್ಸ್ ಸ್ಪೋರ್ಟ್ಸ್ ಅಕಾಡೆಮಿ ಮುಖ್ಯಸ್ಥ ಹಾಗೂ ರೋಟರಿ ರಾಯಲ್ ಕ್ಲಬ್ ಅಧ್ಯಕ್ಷ ಬಿ.ಕೆ. ಗಂಗಾಧರ್ ಮಾತನಾಡಿ, ಕಳೆದ ವರ್ಷದಿಂದ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿಯನ್ನು ನಡೆಸಿಕೊಂಡು ಬರಲಾಗುತ್ತಿದ್ದು, ಮೊದಲ ವರ್ಷವೇ ಯುವತಿಯರ ಕ್ರಿಕೆಟ್ ಪಂದ್ಯಾವಳಿಗೆ ಉತ್ತಮ ಪ್ರತಿಕ್ರಿಯೆ ದೊರೆತ್ತಿದೆ. ರಾಜ್ಯ ಮಟ್ಟದಲ್ಲಿ ಯಾರು ಕೂಡ ಮಹಿಳೆಯರಿಗಾಗಿ ಪಂದ್ಯಾವಳಿ ಆಯೋಜನೆ ಮಾಡುತ್ತಿಲ್ಲ, ಹಾಗಾಗಿ ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚು ಪ್ರಚಲಿತವಾಗಿ ಹೊರಹೊಮ್ಮುತ್ತಿರುವ ಮಹಿಳಾ ಕ್ರಿಕೆಟ್ ಗೆ ಹಾಸನ ಜಿಲ್ಲೆಯಲ್ಲಿ ಉತ್ತೇಜನ ನೀಡುವ ಸಲುವಾಗಿ ಈ ಪಂದ್ಯಾವಳಿ ನಡೆಸಿಕೊಂಡು ಬರಲಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ಪಂದ್ಯಾವಳಿಯಲ್ಲಿ ಇನಷ್ಟು ದೊಡ್ಡ ಮಟ್ಟದಲ್ಲಿ ನಡೆಸಲು ಯೋಜನೆ ಸಿದ್ದ ಪಡಿಸಿಕೊಳ್ಳಲಾಗಿದೆ ಎಂದರು.

# ಮಹನೀಯರ ಜಯಂತಿ ಸಮುದಾಯಕ್ಕೆ ಸೀಮಿತವಾಗದಿರಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಮಹನೀಯರ ಜಯಂತಿಗಳನ್ನು ಕೇವಲ ಆ ಸಮುದಾಯದವರು ಮತ್ತು ಕೆಲವೇ ಅಧಿಕಾರಿಗಳು ಆಚರಿಸುವ ಪರಿಸ್ಥಿತಿ ನಿರ್ಮಾಣವಾಗಿರುವುದು ನೋವಿನ ಸಂಗತಿ ಎಂದು ಟಿಎಪಿಸಿಎಂಎಸ್ ನಿರ್ದೇಶಕ ಎಂ.ಆರ್. ಅನಿಲ್ ಕುಮಾರ್ ಬೇಸರ ವ್ಯಕ್ತಪಡಿಸಿದರು.

ಪಟ್ಟಣದ ಮಿನಿ ವಿಧಾನಸೌಧದ ಆವರಣದಲ್ಲಿ ಮಂಗಳವಾರ ತಾಲೂಕು ಆಡಳಿತ, ತಾಲೂಕು ಸವಿತಾ ಕಲಾ ಸಂಘ ಹಾಗೂ ತಾಲೂಕು ನ್ಯೂ ಸವಿತಾ ಸಮಾಜದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿಯಲ್ಲಿ ಮಾತನಾಡಿ, ಮಹನೀಯರ ಜಯಂತಿಗಳನ್ನು ಕೇವಲ ಒಂದು ನಿರ್ದಿಷ್ಟ ಸಮುದಾಯ ಅಥವಾ ಜಾತಿಗೆ ಸೀಮಿತಗೊಳಿಸುವುದು ಸೂಕ್ತವಲ್ಲ ಎಂದರು.

ಮಹನೀಯರ ತತ್ವ, ಆದರ್ಶ ಮತ್ತು ಕೊಡುಗೆಗಳು ಸರ್ವಜನರಿಗೂ ಅನ್ವಯಿಸುತ್ತವೆ. ಜಯಂತಿಗಳು ಜಾತಿ ಆಧಾರಿತ ಆಚರಣೆಯಾಗದೆ, ಸಮಾಜದ ಎಲ್ಲಾ ವರ್ಗದವರು ಒಟ್ಟಾಗಿ ಸೇರಿ ಆಚರಿಸುವ ಸಾರ್ವತ್ರಿಕ ಕಾರ್ಯಕ್ರಮಗಳಾಗಬೇಕು. ಇದರಿಂದ ಏಕತೆ ಮತ್ತು ಸೌಹಾರ್ದತೆ ಮೂಡುತ್ತದೆ. ಆಗ ಮಾತ್ರ ಅವರ ತತ್ವ ಸಿದ್ಧಾಂತಗಳು ಎಲ್ಲರಿಗೂ ತಿಳಿದು ಜೀವನಕ್ಕೆ ಮಾರ್ಗದರ್ಶನವಾಗಲಿದೆ ಎಂದು ತಿಳಿಸಿದರು.

ಸವಿತಾ ಸಮಾಜ ಹಿಂದಿನಿಂದಲೂ ಸಾಮಾಜಿಕ ಸಮಾನತೆ ಮತ್ತು ನ್ಯಾಯದ ನೆಲೆಯಲ್ಲಿ ಸೇವೆ ಸಲ್ಲಿಸುತ್ತಾ ಬಂದಿದೆ. ಸವಿತಾ ಸಮಾಜವು ಇಂದು ಆರ್ಥಿಕ, ಸಾಮಾಜಿಕ, ರಾಜಕೀಯ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದೆ. ಈ ಸಮಾಜದವರನ್ನು ಮೇಲೆತ್ತುವ ಕಾರ್ಯ ಆಗಬೇಕಾಗಿದೆ.

ಈ ಹಿನ್ನೆಲೆಯಲ್ಲಿ ಸವಿತಾ ಮಹರ್ಷಿ ಜಯಂತಿ ಆಚರಣೆಯು ಈ ಸಮುದಾಯದವರ ಜನರನ್ನು ಸಂಘಟಿಸಲು, ಸಾಮಾಜಿಕವಾಗಿ, ಆರ್ಥಿಕವಾಗಿ ಬಲಪಡಿಸಲು ಸಹಾಯಕವಾಗಲಿದೆ. ಸಮಾಜವು ಶಿಕ್ಷಣಕ್ಕೆ ಒತ್ತು ನೀಡಬೇಕು. ಶಿಕ್ಷಣದಿಂದ ಸ್ವಾವಲಂಬಿಸಿ ಬದುಕಿನೊಂದಿಗೆ ಆರ್ಥಿಕವಾಗಿ ಸದೃಢವಾಗಲು ಸಾಧ್ಯವಿದೆ ಎಂದರು.

ಈ ಜಯಂತಿ ಆಚರಣೆಯು ಕೇವಲ ಸವಿತಾ ಸಮಾಜದವರಿಗೆ ಸೀಮಿತವಾದ ಆಚರಣೆಯಾಗದೇ ಸರ್ವರ ಏಳಿಗೆಯ ಪ್ರತೀಕವಾಗಲಿ. ಸವಿತಾ ಮಹರ್ಷಿಗಳ ಹಾದಿಯಲ್ಲಿ ನಾವೆಲ್ಲ ಸಾಗಿ ಆಚಾರ-ವಿಚಾರ ಮೈಗೂಡಿಸಿಕೊಳ್ಳೋಣ. ಸಮಾಜದಲ್ಲಿ ಸತ್ಪ್ರಜೆಗಳಾಗಿ, ಸರ್ವರನ್ನು ಗೌರವಿಸುವಂತಾಗೋಣ. ಎಲ್ಲ ವರ್ಗದ ಜನರಿಗೂ ತಾರತಮ್ಯವಿಲ್ಲದೇ ಸವಿತಾ ಸಮಾಜ ಸೇವೆ ನೀಡುತ್ತಿರುವುದು ಹೀಗೆಯೇ ಮುಂದುವರೆಯಲಿ. ಸವಿತಾ ಸಮಾಜದವರು ಸಾಮಾಜಿಕ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಮತ್ತಷ್ಟು ಸದೃಢವಾಗಲಿ ಎಂದು ಶುಭ ಹಾರೈಸಿದರು.

ತಾಲೂಕು ನ್ಯೂ ಸವಿತಾ ಸಮಾಜದ ಅಧ್ಯಕ್ಷ ಕೆ.ಎಂ. ಲೋಹಿತ್ ಮಾತನಾಡಿ, ಶಿವನ ದಿವ್ಯದೃಷ್ಟಿಯಿಂದ ಜನ್ಮತಾಳಿದ ಸವಿತಾ ಮಹರ್ಷಿ ದೇವಾನು ದೇವತೆಯರ ಆಯುಷ್ಕರ್ಮ ಸೇವೆ ಮಾಡುತ್ತಿದ್ದರು. ಅವರೊಬ್ಬ ಯುಗ ಪುರುಷರಾಗಿದ್ದರು ಎಂದರು.

ಸವಿತಾ ಮಹರ್ಷಿ ಜಯಂತಿ ಆಚರಣೆಯಿಂದ ಸಮುದಾಯದ ಜನರನ್ನು ಸಂಘಟಿಸಲು ಸಹಾಯವಾಗುತ್ತದೆ. ಕಡಿಮೆ ಜನಸಂಖ್ಯೆ ಹೊಂದಿರುವ ಸವಿತಾ ಸಮಾಜದವರು ಸಂಘಟಿತರಾದರೆ ಮಾತ್ರ ಸಮುದಾಯ ಮುಖ್ಯವಾಹಿನಿಗೆ ಬರಲು ಸಾಧ್ಯ. ಸಂಘಟನೆಗೆ ಬಲ ತುಂಬಲು ಸಮುದಾಯದವರು ನಿರ್ಣಾಯಕ ಪಾತ್ರವಹಿಸಬೇಕು.

ಸಮಾಜ ಸಂಘಟನೆಯಿಂದ ಸರ್ಕಾರದ ಸೌಲಭ್ಯ ಬಳಸಿಕೊಂಡು ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಬೆಳೆಯಬೇಕು.

ಪಟ್ಟಣದಲ್ಲಿ ಸಮಾಜದ ಕಾರ್ಯ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಭವನ ನಿರ್ಮಾಣ ಮಾಡಲು ನಿವೇಶನವನ್ನು ಒದಗಿಸಿದ್ದು ಮುಂದಿನ ದಿನಗಳಲ್ಲಿ ಭವನ ನಿರ್ಮಾಣ ಮಾಡಲು ಅನುದಾನ ಒದಗಿಸಬೇಕೆಂದು ಮನವಿ ಮಾಡಿದರು.

ಸವಿತಾ ಮಹರ್ಷಿಯವರ ಭಾವಚಿತ್ರವನ್ನು ಮಂಗಳವಾದ್ಯದೊಂದಿಗೆ ತಾಲೂಕು ಕಚೇರಿಯಿಂದ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಬಿಜೆಪಿ ಮುಖಂಡ ಸಿ.ಆರ್.ಚಿದಾನಂದ್ ಮಾತನಾಡಿದರು. ಶಿರಸ್ತೆದಾರ್ ಪವನ್ ಕುಮಾರ್, ಉಪನೊಂದಣಾಧಿಕಾರಿ ದೇವರಾಜ್, ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಗುರುಮೂರ್ತಿ, ಕಾರ್ಯಧ್ಯಕ್ಷ ಜಿ. ವೆಂಕಟೇಶ್, ಜಿಲ್ಲಾ ಸಂಘದ ಉಪಾಧ್ಯಕ್ಷ ಬೇಲೂರು ಜಯರಾಮ್, ತಾಲೂಕು ನ್ಯೂ ಸವಿತಾ ಸಮಾಜದ ಕಾರ್ಯದರ್ಶಿ ಗಣೇಶ್, ಸಮಾಜದ ಮುಖಂಡರಾದ ಬಿ.ಎಂ.ಪ್ರಕಾಶ್, ಸಿ.ಆರ್. ಕುಮಾರ್, ಮಣಿ, ಗೋಪಿ, ತ್ಯಾಗರಾಜ್, ಸಿ.ಆರ್.ರಮೇಶ್, ಎ.ಪಿ.ದೇವರಾಜು ಹಾಗೂ ಇತರರಿದ್ದರು.

# ಮಂಜುನಾಥಸ್ವಾಮಿ ಸಹಕಾರ ಸಂಘಕ್ಕೆ ಅವಿರೋಧ ಆಯ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಗ್ರಾಮದ ಶ್ರೀ ಮಂಜುನಾಥಸ್ವಾಮಿ ಪತ್ತಿನ ಸೌಹಾರ್ದ ಸಹಕಾರಿ ಸಂಘ ನಿಯಮಿತದ ಅಧ್ಯಕ್ಷರಾಗಿ ರಾಜಶೇಖರ್ ಹಾಗೂ ಉಪಾಧ್ಯಕ್ಷರಾಗಿ ಅಣ್ಣಸ್ವಾಮಿ ಅವಿರೋಧವಾಗಿ ಆಯ್ಕೆಯಾದರು.

ಇಬ್ಬರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಘೋಷಿಸಿದರು.

ನೂತನ ಅಧ್ಯಕ್ಷ ರಾಜಶೇಖರ್ ಮಾತನಾಡಿ, ಯಾವುದೇ ಸಂಘ ಸಂಸ್ಥೆಗಳು ಪಾರದರ್ಶಕ ವ್ಯವಹಾರ ಹೊಂದಿದ್ದಲ್ಲಿ ಮಾತ್ರ ಪ್ರಗತಿ ಸಾಧಿಸಲು ಸಾಧ್ಯ. ಸಂಘದ ಎಲ್ಲಾ ಸದಸ್ಯರ ವಿಶ್ವಾಸ ಪಡೆದು ಸಂಘದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವುದು. ಹೆಚ್ಚಿನ ಲಾಭ ಗಳಿಸುವುದರ ಜೊತೆಗೆ ಸದಸ್ಯರ ಕ್ಷೇಮಾಭಿವೃದ್ಧಿಗೂ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆಯಾದ ರಾಜಶೇಖರ್ ಹಾಗೂ ಅಣ್ಣಸ್ವಾಮಿ ಅವರನ್ನು ಸಂಘದ ವತಿಯಿಂದ ಅಭಿನಂದಿಸಲಾಯಿತು.

ಕಾರ್ಯದರ್ಶಿ ಆರ್.ಎನ್. ಸ್ವಾಮಿ, ಖಜಾಂಚಿ ಕೃಷ್ಣ, ನಿಕಟಪೂರ್ವ ಅಧ್ಯಕ್ಷ ಕಾಂತರಾಜು, ನಿರ್ದೇಶಕರಾದ ಅರುಣ, ನಾಗರಾಜು, ರಮ್ಯಾ, ಮಂಜು, ಲತಾ, ಮಂಜು, ನವೀನ್ ಹಾಗೂ ಇತರರು ಇದ್ದರು.

# ಹಾಸನ ಮಹಾನಗರ ಪಾಲಿಕೆ ವಾರ್ಡ್‌ವಾರು ಕರಡು ಪ್ರಕಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರ ಪ್ರಕಾರ, 2011 ರ ಜನಗಣತಿ ಆಧಾರದ ಮೇರೆಗೆ ಹಾಸನ ಮಹಾನಗರ ಪಾಲಿಕೆಗೆ ವಾರ್ಡ್‌ಗಳನ್ನು ಪುನರ್ ವಿಂಗಡಣೆ ನಿಗದಿ ಪಡಿಸಿ ರಾಜ್ಯ ಸರ್ಕಾರ ಮಂಗಳವಾರ ಕರಡನ್ನು ಪ್ರಕಟಿಸಿದೆ.

ವಾರ್ಡ್‌ಗಳಲ್ಲಿ ಯಾವುದೇ ಬದಲಾವಣೆ ಆಗಿಲ್ಲ. ಈ ಹಿಂದೆ ನಗರಸಭೆ ಅವಧಿಯಲ್ಲಿ ಇದ್ದಷ್ಟೇ ಅಂದರೆ 35 ವಾರ್ಡ್ಗಳೇ ಈಗಲೂ ಮುಂದುವರಿದಿವೆ. ಆದರೆ ಹಾಸನ ಮಹಾನಗರ ಪಾಲಿಕೆಯಾದ ನಂತರ ಎಲ್ಲ 35 ವಾರ್ಡ್‌ಗಳ ವ್ಯಾಪ್ತಿ ಮತ್ತು ವಿಸ್ತೀರ್ಣ ಹಿಗ್ಗಿದೆ.

ಇದೀಗ ಆಯಾ ವಾರ್ಡ್‌ಗಳಿಗೆ ಸಂಬಂಧಿಸಿದ ಗಡಿ ವ್ಯಾಖ್ಯಾನ(ಚೆಕ್ಕುಬಂದಿ) ನಿಗದಿಪಡಿಸಿ ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ ಆದೇಶ ಹೊರಡಿಸಿದ್ದಾರೆ.




ಈ ಮೂಲಕ ಹಾಸನ ಮಹಾನಗರ ಪಾಲಿಕೆಯ ಕರಡು ವಾರ್ಡ್‌ವಾರು ಕ್ಷೇತ್ರ ಪುನರ್ವಿಂಗಡಣಾ ಮಾಹಿತಿಯನ್ನು ಸಾರ್ವಜನಿಕರ ಅವಗಾಹನೆಗಾಗಿ ಪ್ರಕಟಿಸಲಾಗಿದೆ. ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳ ತರುವಾಯ ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಈ ಕರಡು ಅಧಿಸೂಚನೆಗೆ ಸಂಬಂಧಿಸಿದಂತೆ ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಲು ಇಚ್ಛಿಸುವ ವ್ಯಕ್ತಿಗಳು, ಅದನ್ನು ಲಿಖಿತದಲ್ಲಿ ಕಾರಣ ಸಹಿತವಾಗಿ ದಾಖಲೆಗಳೊಂದಿಗೆ ನಿಗದಿತ ದಿನಾಂಕಕ್ಕೆ ಮೊದಲು ಹಾಸನ ಜಿಲ್ಲಾಧಿಕಾರಿ ಅವರಿಗೆ ಸಲ್ಲಿಸಬೇಕೆಂದು ಮಂಜುನಾಥ್ ಅವರು ಸೂಚಿಸಿದ್ದಾರೆ. ಆಕ್ಷೇಪಣೆ ಸಲ್ಲಿಕೆಗೆ ಕಾಲಾವಕಾಶ ನೀಡಿರುವುದರಿಂದ, ಅದರಲ್ಲಿ ಏನಾದರೂ ಪ್ರಬಲ ಆಕ್ಷೇಪಣೆ ಇದ್ದರೆ ಹಾಲಿ ಪ್ರಕಟ ಮಾಡಿರುವ ಕರಡುವಿನಲ್ಲಿ ಸಣ್ಣಪುಟ್ಟ ಬದಲಾವಣೆ ಆಗಲಿದೆ. ಇಲ್ಲದೇ ಇದ್ದರೆ ಇದೇ ಅಂತಿಮ ಆಗಲಿದ್ದು, ಇದನ್ನೇ ಚುನಾವಣೆಗೆ ಮಾನ್ಯ ಮಾಡುವ ಸಾಧ್ಯತೆ ಇದೆ.

ಪಾಲಿಕೆ ವಾರ್ಡ್ ವಿಂಗಡಣೆ ಕರಡು ಪ್ರಕಟ ನಂತರ ರಾಜಕೀಯ ಪಕ್ಷಗಳ ಮುಖಂಡರಲ್ಲಿ ಚಟುವಟಿಕೆ ಬಿರುಸುಗೊಂಡಿವೆ.

# ಅನೈರ್ಮಲ್ಯ ತಾಣದಲ್ಲಿ ಗಿಡ ನೆಟ್ಟ ಪಟ್ಟಣ ಪಂಚಾಯಿತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ಬದಿ ಕೆಲವರು ಕಸ ಎಸೆಯುತ್ತಿದ್ದುದನ್ನು ಗಮನಿಸಿದ ಮುಖ್ಯಾಧಿಕಾರಿ ತಂಡದವರು, ಕಸವಿದ್ದ ಸ್ಥಳವನ್ನು ಶುಚಿಗೊಳಿಸಿ, ಆ ಸ್ಥಳದಲ್ಲಿ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಾರ್ವಜನಿಕ ವಲಯದಲ್ಲಿ ಪ್ರಶಂಸೆ ವ್ಯಕ್ತವಾಗಿದೆ. ಪ್ರತಿದಿನ ಪ್ರತಿಯೊಂದು ಮನೆ ಬಳಿಗೆ ಕಸದ ವಾಹನ ಬರುತ್ತದೆ. ಅದರಲ್ಲಿ ಹಸಿ ಮತ್ತು ಒಣ ಕಸವೆಂದು ವಿಂಗಡಿಸಿ ಪಟ್ಟಣ ಪಂಚಾಯಿತಿ ಸಿಬ್ಬಂದಿ ತೆಗೆದುಕೊಂಡು ಹೋಗಿ ನಿಗದಿಪಡಿಸಿರುವ ಕಾಂಪೋಸ್ಟ್ ಗುಂಡಿಗೆ ಹಾಕಿ ಗೊಬ್ಬರ ತಯಾರಿಸುತ್ತಾರೆ.



ಆದರೆ ವಿದ್ಯಾವಂತ ಮತ್ತು ಪದವಿ ಪಡೆದ ನಾಗರಿಕರು, ತಮ್ಮ ಮನೆ ಬಳಿಗೆ ಕಸದ ವಾಹನ ಬಂದಾಗ ಕಸ ಕೊಡಲು ಸಾಧ್ಯವಾಗದೆ, ತಾವು ಶಾಲೆ, ಕಾಲೇಜು, ಕಚೇರಿಗೆ ಹೋಗುವ ಸಂದರ್ಭದಲ್ಲಿ ರಸ್ತೆಯಂಚಿನಲ್ಲಿ ಬಿಸಾಡಿ ಹೋಗುತ್ತಾರೆ.

ಇವರು ತಮ್ಮ ಮುಂದಿನ ಭವಿಷ್ಯವನ್ನು ಅರಿತಿಲ್ಲವೆ ಎಂಬುದು ಪ್ರಶ್ನಾರ್ಥಕವಾಗಿದೆ.

ಅಲ್ಲಲ್ಲಿ ಬಿಸಾಡಿದ ಕಸವನ್ನು ಸಂಗ್ರಹಿಸುತ್ತಿದ್ದ ಪಂಚಾಯಿತಿ ಸಿಬ್ಬಂದಿಗಳು, ಇಲ್ಲಿ ಕಸ ಹಾಕಿದರೆ ಶಿಕ್ಷೆಗೆ ಒಳಪಡಿಸಲಾಗುತ್ತದೆ ಎಂಬ ನಾಮಫಲಕ ಹಾಕಿದರೂ ಬಿಸಾಡಿ ಹೋಗುತ್ತಿದ್ದಾರೆ. ಇಂತಹ ನಾಗರೀಕರು ಸಮಾಜಕ್ಕೆ ಕಂಟಕವಾಗಿದ್ದಾರೆ.

ಮುಖ್ಯಾಧಿಕಾರಿ ಮಂಜುನಾಥ್ ಅವರು, ತಮ್ಮ ತಂಡದೊಂದಿಗೆ ಕಸ ವಿಲೇವಾರಿ ಮಾಡಿ, ಆ ಸ್ಥಳದಲ್ಲಿ ಗಿಡಗಳನ್ನು ನೆಡಲು ಮುಂದಾಗಿರುವುದು ಸಾರ್ವಜನಿಕರಿಂದ ಪ್ರಶಂಸೆ ವ್ಯಕ್ತವಾಗಿದೆ.

ಇತ್ತೀಚೆಗೆ ಇಡಿ ಭೂ ಮತ್ತು ವಾಯುಮಂಡಲವೂ ಸಹ ಕ್ರಿಮಿನಾಶಕಗಳಿಂದ ಕೂಡಿದ್ದು ಉಸಿರಾಡಿದರೆ ರೋಗಕ್ಕೆ ತುತ್ತಾಗುತ್ತಿರುವುದರಿಂದ, ಕನಿಷ್ಠ ಭೂಮಿಯನ್ನು ಸ್ವಚ್ಛಗೊಳಿಸಿ ಉತ್ತಮ ಪರಿಸರ ಕಾಪಾಡಲು ಮುಂದಾದರೆ, ಮುಂದಿನ ಭವಿಷ್ಯ ಅರಿಯದ ಅನಾಗರೀಕರು ಕಸವನ್ನು ಎಲ್ಲೆಂದರಲ್ಲಿ ಎಸೆಯುತ್ತಿದ್ದಾರೆ. ಇಂತಹವರಿಗೆ ಕ್ರಿಮಿನಲ್ ಪ್ರಕರಣ ದಾಖಲಿಸಿ ಶಿಕ್ಷೆಗೆ ಒಳಪಡಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಪಟ್ಟಣದಿಂದ ಹಾಸನ, ಭೈರಾಪುರ, ಕಣತೂರು, ಹಳೆ ಆಲೂರು, ಹುಣಸವಳ್ಳಿ ರಸ್ತೆಗಳಲ್ಲಿ ಅನಾಗರೀಕರು ರಸ್ತೆಯಂಚಿನಲ್ಲಿ ಕಸ ಎಸೆಯುತ್ತಿದ್ದಾರೆ. ಅಲ್ಲಲ್ಲಿ ಕಸ ಎಸೆಯುತ್ತಿದ್ದ ಸ್ಥಳವನ್ನು ಶುಚಿಗೊಳಿಸಿ ಆ ಸ್ಥಳದಲ್ಲಿ ಗಿಡಗಳನ್ನು ನೆಡುತ್ತಿದ್ದೇವೆ. ಗೌಪ್ಯವಾಗಿ ಸಿಸಿ ಟಿವಿ ಅಳವಡಿಸಲಾಗಿದೆ. ಮುಂದಿನ ದಿನಗಳಲ್ಲಿ ಕಸ ಬಿಸಾಡಿದವರನ್ನು ಗುರುತಿಸಿ, ಕ್ರಿಮಿನಲ್ ಪ್ರಕರಣ ದಾಖಲಿಸುವ ಮೂಲಕ ಕ್ರಮ ಕೈಗೊಳ್ಳಲಾಗುವುದು ಎಂದು ಮಂಜುನಾಥ್ ಹೇಳಿದರು.

# ಇಂದು ಸಕಲೇಶಪುರದಾದ್ಯಂತ ಪೌತಿ ಖಾತೆ ಆಂದೋಲನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಂದಾಯ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಯಾದ ಪೌತಿ/ವಾರಸುದಾರರ ಖಾತೆ ಆಂದೋಲನವನ್ನು ತಾಲೂಕಿನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ಸುಪ್ರೀತಾ ತಿಳಿಸಿದ್ದಾರೆ.



ಕೃಷಿ ಜಮೀನಿನ ಮಾಲೀಕರು ಮರಣ ಹೊಂದಿದ ನಂತರ ಪೌತಿ ಅಥವಾ ವಾರಸುದಾರರ ಪ್ರಕಾರ ಮೃತರ ಉತ್ತರಾಧಿಕಾರಿಗಳ ಹೆಸರಿಗೆ ಖಾತೆ ಬದಲಾವಣೆ ಆಗದೆ ಇರುವ ಪ್ರಕರಣಗಳನ್ನು ಸರಳಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಪೌತಿ ಖಾತೆ ಆಂದೋಲನವನ್ನು ಜಾರಿಗೆ ತಂದಿದೆ ಎಂದು ಹೇಳಿದರು.

ಫೆ. 5 ರಂದು ಪೌತಿ ಖಾತೆ ಆಂದೋಲನ ಆಯೋಜಿಸಲಾಗಿದ್ದು, ಮರಣ ಹೊಂದಿರುವ ಖಾತೆದಾರರ ಕುಟುಂಬಸ್ಥರು ಇ-ಪೌತಿ ಖಾತೆ ಬದಲಾವಣೆಗೆ ತಮ್ಮ ಹೋಬಳಿ ನಾಡಕಚೇರಿಯಲ್ಲಿ ಅರ್ಜಿ ಸಲ್ಲಿಸಿ ಹಕ್ಕು ಬದಲಾವಣೆ ಮಾಡಿಕೊಳ್ಳಬೇಕು. ಅರ್ಜಿಯೊಂದಿಗೆ ಪ್ರಸ್ತುತ ಸಾಲಿನ ಪಹಣಿ ಪತ್ರಿಕೆ, ವಂಶವೃಕ್ಷ, ಮೃತರ ಮರಣ ಪ್ರಮಾಣ ಪತ್ರ ಹಾಗೂ ಎಲ್ಲಾ ವಾರಸುದಾರರ ಆಧಾರ್ ಕಾರ್ಡ್ ಸಲ್ಲಿಸುವುದು ಕಡ್ಡಾಯ. ರೈತರು ಹಾಗೂ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಜಮೀನಿನ ಖಾತೆ ಬದಲಾವಣೆಯನ್ನು ಸುಗಮವಾಗಿ ಪೂರ್ಣಗೊಳಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ.

# ಶ್ರೀ ಸವಿತಾ ಮಹರ್ಷಿ-ಬಿಜ್ಜಳ ಮಹಾರಾಜರ ಜಯಂತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕು ಸವಿತಾ ಸಮಾಜ ಸಹಕಾರ ಸಂಘದ ವತಿಯಿಂದ ಶ್ರೀ ಸವಿತಾ ಮಹರ್ಷಿ ಹಾಗೂ ಬಿಜ್ಜಳ ಮಹಾರಾಜರ ಜಯಂತಿಯನ್ನು ಪಟ್ಟಣದಲ್ಲಿ ಆಚರಿಸಲಾಯಿತು.

ಪಟ್ಟಣದ ಪಂಪ್ ಹೌಸ್ ರಸ್ತೆಯಲ್ಲಿರುವ ಸವಿತಾ ಸಮಾಜ ಸಹಕಾರ ಸಂಘದ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಶ್ರೀ ಸವಿತಾ ಮಹರ್ಷಿ ಹಾಗೂ ಬಿಜ್ಜಳ ಮಹಾರಾಜರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಅರ್ಪಿಸಲಾಯಿತು.



ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಮಾತನಾಡಿ, ಶ್ರೀ ಸವಿತಾ ಮಹರ್ಷಿಗಳು ಶ್ರಮ, ಸೇವೆ ಮತ್ತು ಶಿಸ್ತಿನ ಮೂಲಕ ಸಮಾಜಕ್ಕೆ ದಾರಿ ತೋರಿದ ಮಹಾನ್ ವ್ಯಕ್ತಿಯಾಗಿದ್ದಾರೆ. ಯುವಜನರು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಏಕತೆ ಅಗತ್ಯವಿದ್ದು, ಪುರಸಭೆ ವತಿಯಿಂದ ಸಾಧ್ಯವಾದ ಎಲ್ಲಾ ಸಹಕಾರವನ್ನು ನೀಡಲಾಗುವುದು ಎಂದರು.

ಸದಸ್ಯೆ ತೀರ್ಥಕುಮಾರಿ ವೆಂಕಟೇಶ್ ಮಾತನಾಡಿ, ಶ್ರೀ ಸವಿತಾ ಮಹರ್ಷಿಗಳು ಶ್ರಮ, ಸೇವೆ ಹಾಗೂ ಶಿಸ್ತುಗಳ ಮಹತ್ವವನ್ನು ಸಮಾಜಕ್ಕೆ ಸಾರಿದ ಮಹಾನ್ ಸಂತರು. ವೇದಗಳ ಕಾಲದಲ್ಲೇ ಇದ್ದ ಸವಿತಾ ಮಹರ್ಷಿಗಳು ಸಾಮವೇದ ರಚನೆಗೆ ಕಾರಣಕರ್ತರಾಗಿದ್ದು, ಸವಿತಾ ಸಮಾಜದ ಗುರುಗಳಾಗಿ ಇಂದಿಗೂ ಪೂಜ್ಯರಾಗಿದ್ದಾರೆ. ಅದೇ ರೀತಿ ಬಿಜ್ಜಳ ಮಹಾರಾಜರು ಸಾಮಾಜಿಕ ನ್ಯಾಯ, ಆಡಳಿತ ಶಿಸ್ತು ಹಾಗೂ ಸಮಾನತೆಯ ಪ್ರತೀಕವಾಗಿದ್ದರು ಎಂದರು.

ಸವಿತಾ ಸಮಾಜವು ಕೇವಲ ಕ್ಷೌರಿಕ ವೃತ್ತಿಗೆ ಮಾತ್ರ ಸೀಮಿತವಾಗದೆ, ನಾದಸ್ವರ ಸಂಗೀತ ಸೇರಿದಂತೆ ವಿವಿಧ ಸೇವಾ ವೃತ್ತಿಗಳ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸುತ್ತಿದೆ ಎಂದರು.

ಕಾಂಗ್ರೆಸ್ ಮುಖಂಡ ಬಿ.ಎಂ. ಸಂತೋಷ್ ಮಾತನಾಡಿ, ಸರ್ಕಾರವು ಸವಿತಾ ಸಮಾಜವನ್ನು ಹಿಂದುಳಿದ ವರ್ಗದ ಜಾತಿಯಾಗಿ ಗುರುತಿಸಿ ನೀಡಿರುವ ಸೌಲಭ್ಯಗಳು ನಿಜಕ್ಕೂ ಸಮರ್ಪಕವಾಗಿ ಅನ್ವಯವಾಗಬೇಕು. ಜಾತಿ ನಿಂದನೆಗಳಿಗೆ ಅವಕಾಶ ನೀಡದೇ, ಈ ಸಮಾಜಕ್ಕೆ ನ್ಯಾಯ ಸಿಗಬೇಕು ಎಂದು ಒತ್ತಾಯಿಸಿದರು.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ದಿನೇಶ್, ಸಹಕಾರ ಸಂಘದ ಅಧ್ಯಕ್ಷ ನರಸಿಂಹಸ್ವಾಮಿ, ಉಪಾಧ್ಯಕ್ಷ ವಸಂತ್, ನಿರ್ದೇಶಕರಾದ ಬಿ.ವಿ. ಚಂದ್ರು, ಎಸ್.ಆರ್. ಮೋಹನ್, ಬಿ.ಕೆ. ವಿಷ್ಣುಪ್ರಸಾದ್, ಅನಿಲ್, ಶೀಲಾ, ಕಾರ್ಯದರ್ಶಿ ಸುಮಿತ್ರ ಸದಸ್ಯರಾದ ಮಂಜುಳಾ, ಚೂಡಾಮಣಿ, ಕೃಷ್ಣಪ್ಪ ವಿಶಾಲಾಕ್ಷಮ್ಮ, ರತೀಶ್, ಹರೀಶ್, ಕಾವ್ಯ ಇತರರು ಹಾಜರಿದ್ದರು.

# ಸನ್ಯಾಸಿಹಳ್ಳಿಯಲ್ಲಿ ಸಾಮೂಹಿಕ ಸತ್ಯನಾರಾಯಣ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತಾಲೂಕು ಘಟಕದ ವತಿಯಿಂದ ಸಾಮೂಹಿಕ ಸತ್ಯನಾರಾಯಣ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮ ತಾಲೂಕಿನ ಸನ್ಯಾಸಿಹಳ್ಳಿ ಶ್ರೀ ಶನೇಶ್ವರ ಸಮುದಾಯ ಭವನದಲ್ಲಿ ನಡೆಯಿತು.



ಬಿಕ್ಕೋಡು ಕೋಡಿಮಠದ ಚೇತನ್ ಮರಿದೇವರು ಮಾತನಾಡಿ, ಸಾಮೂಹಿಕ ಪೂಜೆಗಳು ಭಕ್ತಿ, ಶ್ರದ್ಧೆ ಮತ್ತು ಸೌಹಾರ್ದತೆಯನ್ನು ಹೆಚ್ಚಿಸುತ್ತವೆ. ಸತ್ಯನಾರಾಯಣ ಪೂಜೆ ಜೀವನದಲ್ಲಿ ಸತ್ಯ, ಧರ್ಮ ಮತ್ತು ನೀತಿಯ ಮಾರ್ಗದಲ್ಲಿ ನಡೆಯಲು ಪ್ರೇರಣೆ ನೀಡುವ ಮಹತ್ವದ ಪೂಜೆ. ಇಂತಹ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಸಮಾಜದಲ್ಲಿ ಶಾಂತಿ, ಏಕತೆ ಹಾಗೂ ನೈತಿಕ ಮೌಲ್ಯಗಳು ಬಲಪಡಿಸುತ್ತವೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗ್ರಾಮೀಣ ಜನರ ಬದುಕಿಗೆ ಆಧ್ಯಾತ್ಮಿಕತೆಯ ಜೊತೆಗೆ ಸಾಮಾಜಿಕ ಜಾಗೃತಿ ನೀಡುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಲೇಖಕ ಚಟ್ನಳ್ಳಿ ಮಹೇಶ್ ಮಾತನಾಡಿ, ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಸ್ತ್ರೀ ಶಕ್ತಿಗೆ ಪ್ರೋತ್ಸಾಹ ನೀಡುವಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹತ್ವದ ಪಾತ್ರ ವಹಿಸುತ್ತಿದೆ. ನಮ್ಮ ನೆಲದ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಶಕ್ತಿ ಸ್ತ್ರೀಯರಲ್ಲಿದೆ. ಅಂತಹ ಸ್ತ್ರೀ ಶಕ್ತಿಯನ್ನು ಸಂಘಟಿಸಿ, ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸುವ ಸತ್ಕಾರ್ಯವನ್ನು ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದೆ ಎಂದು ಹೇಳಿದರು.

ತಾಲೂಕು ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ಅದ್ದೂರಿ ಕುಮಾರ್ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗ್ರಾಮೀಣ ಸಮಾಜವನ್ನು ಆರ್ಥಿಕವಾಗಿ ಮಾತ್ರವಲ್ಲ, ಧಾರ್ಮಿಕ ಹಾಗೂ ಸಾಂಸ್ಕೃತಿಕವಾಗಿ ಸಹ ಬಲಪಡಿಸುವ ಕೆಲಸ ಮಾಡುತ್ತಿದೆ. ಇಂತಹ ಸಾಮೂಹಿಕ ಸತ್ಯನಾರಾಯಣ ಪೂಜೆಗಳ ಮೂಲಕ ಸಮಾಜದಲ್ಲಿ ಏಕತೆ, ಶಾಂತಿ ಮತ್ತು ಸಹಕಾರದ ಮನೋಭಾವನೆ ಬೆಳೆಯುತ್ತದೆ. ಮಹಿಳೆಯರನ್ನು ಕೇಂದ್ರಬಿಂದು ಮಾಡಿಕೊಂಡು ನಡೆಯುವ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳು ಕುಟುಂಬ ವ್ಯವಸ್ಥೆಯನ್ನು ಗಟ್ಟಿಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ. ಕಾಫಿ ಬೆಳೆಗಾರರು ಸೇರಿದಂತೆ ಎಲ್ಲಾ ವರ್ಗದ ಜನರು ಇಂತಹ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಅತ್ಯಂತ ಅಗತ್ಯ ಎಂದು ಹೇಳಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ಟಿ.ಆರ್. ಮಂಜುಳ, ಗ್ರಾಮ ಪಂಚಾಯಿತಿ ಅಧ್ಯಕ್ಷ ಶಿವೇಗೌಡ, ಡಿ. ಕಲ್ಪನಾ ಚನ್ನಕೇಶವ, ಪುನೀತ್ ಮತ್ತಿತರರಿದ್ದರು.

# ಒಳ ಚರಂಡಿ ನಿರ್ಮಾಣಕ್ಕೆ ನಿವಾಸಿಗಳ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರೇಹಳ್ಳಿ: ಪಟ್ಟಣದ ಇಂದಿರಾನಗರ ಬೀದಿಯಲ್ಲಿರುವ ಮನೆಗಳ ತ್ಯಾಜ್ಯ ನೀರು ಚರಂಡಿಗೆ ಹರಿದು ಹೋಗುತ್ತಿರುವುದರಿಂದ ಅನೈರ್ಮಲ್ಯ ನಿರ್ಮಾಣವಾಗಿದೆ. ಶಾಶ್ವತ ಪರಿಹಾರವಾಗಿ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ನಿವಾಸಿಗಳು ಒತ್ತಾಯಿಸಿದ್ದಾರೆ.

ಚರಂಡಿ ಸಮರ್ಪಕವಾಗಿದೆ ಕೊಳಚೆ ನೀರು ನಿಂತಲ್ಲಿಯೇ ನಿಂತು ಸೊಳ್ಳೆಗಳು ಉತ್ಪತ್ತಿಯಾಗಿ ಇಲ್ಲಿನ ನಿವಾಸಿಗಳು ನಾನಾ ಕಾಯಿಲೆಗಳಿಗೆ ತುತ್ತಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಿಕೊಡಬೇಕು. ಮಳೆಗಾಲ ಪ್ರಾರಂಭವಾದರೆ, ರಸ್ತೆ ಹಾಗೂ ಚರಂಡಿಯಲ್ಲಿರುವ ಕೊಳಚೆ ನೀರು ಮನೆಗಳಿಗೆ ನುಗ್ಗಿ ನಿವಾಸಿಗಳು ನರಕಯಾತನೆ ಅನುಭವಿಸಬೇಕಾಗುತ್ತದೆ. ಈ ಬಗ್ಗೆ ಪ್ರತಿ ಬಾರಿ ಚುನಾವಣೆ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳಿಗೆ ತಿಳಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರಿದರು.



ಗ್ರಾಮ ಪಂಚಾಯಿತಿ ಕಚೇರಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ, ಕೆಲವೊಮ್ಮೆ ಬಂದು ತಾತ್ಕಾಲಿಕವಾಗಿ ಕಸ ತೆಗೆದು ಹೋಗುವುದಷ್ಟೇ ಮಾಡುತ್ತಾರೆ. ಶಾಶ್ವತ ಒಳಚರಂಡಿ ವ್ಯವಸ್ಥೆ ಕುರಿತು ಯಾವುದೇ ಯೋಜನೆಯನ್ನು ರೂಪಿಸಿಲ್ಲ. ಮುಂದಿನ ದಿನಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಅಥವಾ ಜನಪ್ರತಿನಿಧಿಗಳು ಸೂಕ್ತ ಪರಿಹಾರವಾಗಿ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ವಿಫಲವಾದರೆ, ಸ್ಥಳೀಯರ ಸಹಕಾರದಿಂದ ಪಂಚಾಯಿತಿ ಕಚೇರಿ ಮುಂದೆ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸುಶೀಲ, ಕೆಂಚಪ್ಪ, ತಂಗಿಯಮ್ಮ, ಜುಬೇದ, ಮಂಜಣ್ಣ, ಅನೀಫ್, ರಾಜಿ, ಸಲ್ಮಾ, ಶರೀಫ್, ಉಮರ್ ಇನ್ನಿತರರು ಉಪಸ್ಥಿತರಿದ್ದರು.

# ಅನುದಾನಕ್ಕೆ ಅನುಗುಣವಾಗಿ ಅಭಿವೃದ್ಧಿಗೆ ಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೆತ್ತೂರು: ಮೂಲಭೂತ ಸೌಕರ್ಯ ಒದಗಿಸುವುದು ಜನಪ್ರತಿನಿಧಿಗಳ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರದಿಂದ ಲಭ್ಯವಾಗುವ ಅನುದಾನಕ್ಕೆ ಅನುಗುಣವಾಗಿ ಹಂತ ಹಂತವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಇಲ್ಲಿನ ಶ್ರೀರಾಮ ಬಡಾವಣೆಗೆ ತೆರಳುವ ರಸ್ತೆ ಹಲವು ವರ್ಷಗಳಿಂದ ಹದಗೆಟ್ಟಿದ್ದ ಹಿನ್ನೆಲೆ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಶಾಸಕನಾಗಿ ಕಳೆದ ಎರಡುವರೆ ವರ್ಷದ ಅವಧಿಯಲ್ಲಿ ಹೆತ್ತೂರು ಹೋಬಳಿ ವ್ಯಾಪ್ತಿಯಲ್ಲಿ ಹಲವು ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದರು.

ಹೆತ್ತೂರು ಹೋಬಳಿ ವ್ಯಾಪ್ತಿಯಲ್ಲಿ ಮೂಲಸೌಕರ್ಯಗಳ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಕುಡಿಯುವ ನೀರು, ವಿದ್ಯುತ್ ಮತ್ತು ರಸ್ತೆಗಳಂತಹ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒತ್ತು ನೀಡಲಾಗುವುದು. ಇನ್ನು ಕೆಲವೇ ದಿನಗಳಲ್ಲಿ ಈ ಭಾಗದ ಜನರ ಬಹುದಿನಗಳ ಬೇಡಿಕೆಯಾದ ಕರಗೂರುಕರಗೂರು ಕೊಪ್ಪಲು, ಹಾಡ್ಯಾ, ಹೆತ್ತೂರು ರಸ್ತೆಯನ್ನು 3 ಕಿ.ಮೀ ಯಿಂದ 8 ಕಿ.ಮೀ ವರೆಗೆ ಸುಮಾರು 3.96 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು. ಅಲ್ಲದೆ, ಕೆ.ಪಿ.ಎಸ್. ಶಾಲೆಗೆ ತೆರಳುವ ರಸ್ತೆಯನ್ನು 15 ಲಕ್ಷ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗುವುದು ಎಂದು ಹೇಳಿದರು.

ಹಾಡ್ಲಳ್ಳಿ, ತೊಡುಮನೆಯವರಿಗಿನ 1.5 ಕಿ.ಮೀ ರಸ್ತೆ, ಹಡ್ಲಳ್ಳಿಯಿಂದ ಕಿರ್ಕಳ್ಳಿ ವರಗಿನ 5 ಮೀಟರ್ ಅಗಲದ ರಸ್ತೆ ಹಾಗು ರಾಗಿಪುರದ ಸುಮಾರು 400 ಮೀಟರ್ ರಸ್ತೆ ಅಭಿವೃದ್ಧಿ ಕಾರ್ಯಗಳು ಪ್ರಗತಿಯಲ್ಲಿವೆ. ಮತದಾರರು ನನಗೆ ನೀಡಿರುವ ಒಂದೊಂದು ಮತವೂ ಅತ್ಯಂತ ಮಹತ್ವದ್ದಾಗಿದೆ. ನನ್ನ ಅಧಿಕಾರ ಅವಧಿಯಲ್ಲಿ ಕಿಂಚಿತ್ತೂ ದುರ್ಬಳಕೆ ಮಾಡದೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜ್, ಸದಸ್ಯರಾದ ಡಿಲಾಕ್ಷ, ಉಮೇಶ್, ಮಂಜು, ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕಿ ನೇತ್ರಾ, ಸುರೇಶ್, ಪ್ರತಾಪ್, ಬಿಜೆಪಿ ಶಕ್ತಿ ಕೇಂದ್ರದ ಅಧ್ಯಕ್ಷ ವೇದಮೂರ್ತಿ, ಮುಖಂಡರಾದ ರಾಮಚಂದ್ರ, ಶಿವಣ್ಣ, ಪಿಡಿಓ ರಮೇಶ್ ಉಪಸ್ಥಿತರಿದ್ದರು.

# ವೈಜ್ಞಾನಿಕ ಅರಿವು ವಿದ್ಯಾರ್ಥಿಗಳ ಆದ್ಯತೆಯಾಗಲಿ : ಅಹಮದ್ ಹಗರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಶ್ವದ ಅನಂತ ಪಯಣದಲ್ಲಿ ಭೂಮಿಯೆಂಬುದು ಪುಟ್ಟ ನೀಲಿ ಚುಕ್ಕೆ. ನಾವು ನಕ್ಷತ್ರಗಳ ದೂಳಿನಿಂದ ಬಂದವರು ಎಂಬ ಅರಿವು ನಮ್ಮಲ್ಲಿ ಮೂಡಿದಾಗ ಮಾತ್ರ ನಮಗೆ ಪರಿಸರದ ಮೇಲೆ ಕಾಳಜಿ ಮತ್ತು ವಿಜ್ಞಾನದ ಬಗ್ಗೆ ಕುತೂಹಲ ಬೆಳೆಯಲು ಸಾಧ್ಯವೆಂದು ಬಿಜಿವಿ ಜಿಲ್ಲಾ ಸಮಿತಿ ಸದಸ್ಯ ಅಹಮದ್ ಹಗರೆ ಹೇಳಿದರು.




ಕಟ್ಟಾಯ ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಬ್ರಹ್ಮಾಂಡದ ಅನಂತ ಪಯಣ: ನಮ್ಮ ಮನೆಯಂಗಳದಿಂದ ಕಪ್ಪು ಕುಳಿಯವರೆಗೆ ಎಂಬ ವಿಶೇಷ ವಿಜ್ಞಾನ ಸಂವಾದ ಮತ್ತು ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭೂಮಿಯ ವಾತಾವರಣದ ಪದರಗಳಿಂದ ಆರಂಭಿಸಿ ಸೌರವ್ಯೂಹದ ಗ್ರಹಗಳ ವೈಚಿತ್ರ್ಯ, ನಕ್ಷತ್ರಗಳ ಹುಟ್ಟು-ಸಾವು (ಸೂಪರ್ನೋವಾ) ಹಾಗೂ ಬ್ರಹ್ಮಾಂಡದ ನಿಗೂಢ ರಹಸ್ಯವಾದ ಟಿಕಪ್ಪು ಕುಳಿಟಿ ಕುರಿತು ಸರಳವಾಗಿ ವಿವರಿಸಿದರು. ಪ್ರಶ್ನೆ ಕೇಳುವವನೇ ನಿಜವಾದ ವಿಜ್ಞಾನಿ. ನಿಮ್ಮ ಕಾಲುಗಳು ಭೂಮಿಯ ಮೇಲಿದ್ದರೂ ಮನಸ್ಸು ಆಕಾಶದಾಚೆಗಿನ ಅದ್ಭುತಗಳ ಕಡೆಗೆ ಸದಾ ಚಲಿಸುತ್ತಿರಲಿ ಎಂದು ವಿದ್ಯಾರ್ಥಿಗಳಿಗೆ ಸ್ಪೂರ್ತಿ ತುಂಬಿದರು.

ಬಿಜಿವಿಎಸ್ ತಾಲ್ಲೂಕು ಸಮಿತಿ ಅಧ್ಯಕ್ಷ ಡಾ. ಹೆಚ್.ಜಿ.ಮಂಜುನಾಥ್ ಮಾತನಾಡಿ, ಇಕೋ ಕ್ಲಬ್ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವ ಅಗತ್ಯತೆಯನ್ನು ಪ್ರತಿಪಾದಿಸಿದರು.

ಹಸಿರು ಹೊದಿಕೆಯ ಹೆಚ್ಚಳ, ಮನುಷ್ಯನ ಚಯಾಪಚಯ ಕ್ರಿಯೆ, ದ್ಯುತಿ ಸಂಶ್ಲೇಷಣೆ ಹಾಗು ಸ್ವಚ್ಛತೆಯ ಮಹತ್ವದ ಬಗ್ಗೆ ಆಸಕ್ತಿದಾಯಕ ಮಾಹಿತಿಗಳನ್ನು ಹಂಚಿಕೊಂಡರು. ಅಧ್ಯಕ್ಷತೆಯನ್ನು ಶಾಲೆಯ ಮುಖ್ಯ ಶಿಕ್ಷಕ ರವೀಶ ವಹಿಸಿದ್ದರು. ನಿವೃತ್ತ ಮುಖ್ಯ ಶಿಕ್ಷಕ ವಿಶ್ವನಾಥರಾವ್ ಚವ್ಹಾನ್ ಮಾತನಾಡಿದರು.

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-05

1885: ಬೆಲ್ಜಿಯಂನ ರಾಜ ಲಿಯೋಪೋಲ್ಡ್ ಕಾಂಗೋವನ್ನು ತನ್ನ ವೈಯಕ್ತಿಕ ಆಸ್ತಿಯಾಗಿ ಘೋಷಿಸಿದನು. ಇದು ನಂತರ ಭೀಕರ ಮಾನವೀಯ ದೌರ್ಜನ್ಯಗಳಿಗೆ ಕಾರಣವಾಯಿತು.

1917: ಮೆಕ್ಸಿಕೋ ಹೊಸ ಸಂವಿಧಾನವನ್ನು ಜಾರಿಗೆ ತಂದಿತು. ಇದು ಸಾಮಾಜಿಕ ಹಕ್ಕುಗಳಿಗೆ ಮಹತ್ವ ನೀಡಿದ ಐತಿಹಾಸಿಕ ದಾಖಲೆ.

1936: ಚಾರ್ಲಿ ಚಾಪ್ಲಿನ್ ಅಭಿನಯದ ಪ್ರಸಿದ್ಧ ಚಿತ್ರ ಬಿಡುಗಡೆಯಾಯಿತು.

1958: ಗಮಾಲ್ ಅಬ್ದುಲ್ ನಾಸರ್ ನೇತೃತ್ವದಲ್ಲಿ ಈಜಿಪ್ಟ್ ಮತ್ತು ಸಿರಿಯಾ ಸೇರಿ ಯುನೈಟೆಡ್ ಅರಬ್ ರಿಪಬ್ಲಿಕ್ ಸ್ಥಾಪನೆಯಾಯಿತು.

1971: ಅಮೆರಿಕದ ಅಪೋಲೊ-14 ಯಾನ ಚಂದ್ರನ ಮೇಲೆ ಯಶಸ್ವಿಯಾಗಿ ಇಳಿಯಿತು.

### ಜನನ

1878: ಆಂದ್ರೆ ಸಿಟ್ರೋನ್, ಫ್ರೆಂಚ್ ವಾಹನೋದ್ಯಮದ ದಿಗ್ಗಜ

1910: ಫ್ರಾನ್ಸಿಸ್ ಕ್ರಿಕ್, ಡಿಎನ್‌ಎ ರಚನೆಯ ಸಹ-ಆವಿಷ್ಕಾರಕ, ನೋಬೆಲ್ ವಿಜೇತೆ

### ಮರಣ

1993: ರೊಮೇನಿಯಾದ ಮಾಜಿ ರಾಜ ಮೈಕಲ್

# ಕ್ರಿಸ್ಟಿಯಾನೊ ರೊನಾಲ್ಡೊ ನೀಡಿದ ಸಂದೇಶ




**- ಅಂತೋಣಿ ಮುತ್ತು**
**ವಿ. ಶಿಕ್ಷಕರು 7259675543**

ಕ್ರಿಸ್ಟಿಯಾನೊ ರೊನಾಲ್ಡೊ ವಿಶ್ವ ಫುಟ್‌ಬಾಲ್ ಇತಿಹಾಸದಲ್ಲಿ ಶ್ರಮ, ಶಿಸ್ತು ಮತ್ತು ಆತ್ಮವಿಶ್ವಾಸದ ಪ್ರತೀಕವಾಗಿದ್ದಾರೆ. ಪೋರ್ಚುಗಲ್‌ನ ಸರಳ ಹಿನ್ನೆಲೆಯಿಂದ ಆರಂಭಿಸಿದ ಅವರ ಜೀವನಯಾನ, ನಿರಂತರ ಅಭ್ಯಾಸ ಮತ್ತು ದೃಢ ಸಂಕಲ್ಪದಿಂದ ಜಗತ್ತಿನ ಶ್ರೇಷ್ಠ ಆಟಗಾರರ ಪಟ್ಟಿಗೆ ಅವರನ್ನು ತಂದು ನಿಲ್ಲಿಸಿದೆ. ರೊನಾಲ್ಡೊ ಅವರ ಸಂದೇಶ ಸರಳ ಆದರೆ ಶಕ್ತಿಶಾಲಿ ಟಿಕನಸು ದೊಡ್ಡದಾಗಿರಲಿ, ಪರಿಶ್ರಮ ಅದಕ್ಕಿಂತ ದೊಡ್ಡದಾಗಿರಲಿಟಿ ಅವರು ಯುವಜನತೆಗೆ ತಮ್ಮ ಮೇಲೆ ನಂಬಿಕೆ ಇಟ್ಟು, ಸೋಲುಗಳನ್ನು ಪಾಠಗಳಾಗಿ ಸ್ವೀಕರಿಸಿ, ಪ್ರತಿದಿನ ಉತ್ತಮವಾಗಲು ಪ್ರಯತ್ನಿಸಬೇಕೆಂದು ಪ್ರೇರೇಪಿಸುತ್ತಾರೆ. ಶಿಸ್ತು, ಆರೋಗ್ಯಕರ ಜೀವನ ಶೈಲಿ ಮತ್ತು ಸಕಾರಾತ್ಮಕ ಮನೋಭಾವವೇ ಯಶಸ್ಸಿನ ಮೂಲ ಎಂದು ಅವರು ತೋರಿಸಿದ್ದಾರೆ. ಮೈದಾನದಲ್ಲಿನ ಸಾಧನೆಗಳ ಜೊತೆಗೆ ದಾನಧರ್ಮ ಮತ್ತು ಸಾಮಾಜಿಕ ಸೇವೆಗಳ ಮೂಲಕ ಮಾನವೀಯ ಮೌಲ್ಯಗಳನ್ನೂ ಪ್ರಚಾರ ಮಾಡಿದ್ದಾರೆ. ಅವರ ಜೀವನವು ಪರಿಶ್ರಮದ ಶಕ್ತಿಯನ್ನೂ, ಕನಸುಗಳನ್ನು ನಿಜಗೊಳಿಸುವ ಧೈರ್ಯವನ್ನೂ ಸಾರುತ್ತದೆ. ಇಂದಿನ ಯುವಕರು ರೊನಾಲ್ಡೊ ಅವರ ಸಂದೇಶವನ್ನು ಅಳವಡಿಸಿಕೊಂಡರೆ ತಮ್ಮ ಗುರಿ ಸಾಧಿಸಿ ಸಮಾಜಕ್ಕೆ ಪ್ರೇರಣೆಯಾಗಬಹುದು.

# ಅಪರಿಚಿತ ವಾಹನ ಡಿಕ್ಕಿಯಾಗಿ ಪಾದಚಾರಿ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕೊಣನೂರು: ಅಪರಿಚಿತ ವಾಹನ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ಅರಕಲಗೂಡು ತಾಲ್ಲೂಕು ಬಿಸಿಲಹಳ್ಳಿ ಗ್ರಾಮದಲ್ಲಿ ನಡೆದಿದೆ.

ವಿರಾಜಪೇಟೆಯ ಸುಂದರ್ (70) ಮೃತರು. ಫೆ. 2ರಂದು ಬಿಸಿಲಹಳ್ಳಿ ಗ್ರಾಮದ ಸುರೇಶ್ ಅವರ ಕ್ಯಾಂಟೀನ್ ಮುಂಭಾಗದಿಂದ ಕೊಣನೂರು-ಹಂಡ್ರಂಗಿ ರಸ್ತೆಯ ಎಡಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಯಾವುದೋ ವಾಹನ ಡಿಕ್ಕಿ ಮಾಡಿದೆ. ಅಪಘಾತದ ರಭಸಕ್ಕೆ ಸುಂದರ್ ರಸ್ತೆಯಿಂದ ಸ್ವಲ್ಪ ದೂರಕ್ಕೆ ಬಿದ್ದಿದ್ದಾರೆ. ಎದೆ ಹಾಗೂ ಹೊಟ್ಟೆ ಭಾಗಕ್ಕೆ ಗಂಭೀರ ಪೆಟ್ಟು ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಾಹನದಲ್ಲಿದ್ದ 3 ಲಕ್ಷ ರೂ. ನಗದು ಕಳವು

ಹೊಳೆನರಸೀಪುರ: ಬೊಲೆರೋ ವಾಹನದಲ್ಲಿಟ್ಟಿದ್ದ 3 ಲಕ್ಷ ರೂ. ನಗದು ಕಳವು ಮಾಡಿರುವ ಘಟನೆ ಪಟ್ಟಣದ ಎಪಿಎಂಸಿ ಪ್ರಾಂಗಣದಲ್ಲಿ ನಡೆದಿದೆ.

ಹಳ್ಳಿಮೈಸೂರು ಹೋಬಳಿ ದೊಡ್ಡಹಳ್ಳಿ ಗ್ರಾಮದ ರಮೇಶ್ ಎಂಬುವವರು ಫೆ. 2ರಂದು ಅಡಿಕೆ ವ್ಯಾಪಾರಕ್ಕೆಂದು ಎಪಿಎಂಸಿಗೆ ಬಂದಿದ್ದರು. ಬೊಲೆರೋ ವಾಹನದಲ್ಲಿ 3 ಲಕ್ಷ ರೂ. ಇಟ್ಟು ಶೌಚಾಲಯಕ್ಕೆ ತೆರಳಿದ್ದರು. ಅದನ್ನು ಗಮನಿಸಿದ್ದ ಕಳ್ಳರು ಬಾಗಿಲು ತೆಗೆದು ಹಣದ ಬ್ಯಾಗ್ ಸಮೇತ ಪರಾರಿಯಾಗಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮನೆ ಬೀಗ ಮುರಿದು ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 3.50 ಲಕ್ಷ ರೂ. ಬೆಲೆಯ ಚಿನ್ನಾಭರಣ ಕದ್ದಿರುವ ಘಟನೆ ನಗರದ ಸಿದ್ದಪ್ಪ ನಗರದಲ್ಲಿ ನಡೆದಿದೆ.

ಸರ್ವರ್ ಖಾನ್ ಎಂಬುವವರ ಮನೆಯಲ್ಲಿ ಸೋಮವಾರ ರಾತ್ರಿ ಘಟನೆ ನಡೆದಿದೆ. ತಮ್ಮ ತಾಯಿಗೆ ಹುಷಾರಿಲ್ಲದ ಕಾರಣ ಅವರು ಕುಟುಂಬ ಸಮೇತ ಆಸ್ಪತ್ರೆಗೆ ತೆರಳಿದ್ದರು. ಬೆಳಿಗ್ಗೆ 8 ಗಂಟೆಗೆ ಮನೆಗೆ ಬಂದಾಗ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಡೋರ್ ಲಾಕ್‌ನ ಬಿಡಿಭಾಗಗಳು ಕೆಳಗೆ ಮತ್ತು ಮನೆಯ ಒಳಭಾಗದಲ್ಲಿ ಬಿದ್ದಿದ್ದು, ಒಳ ಹೋಗಿ ನೋಡಿದಾಗ 2 ಬೀರು ಒಡೆದಿರುವುದು ತಿಳಿದುಬಂದಿದೆ. 25 ಗ್ರಾಂ ತೂಕದ ಒಂದು ಚಿನ್ನದ ನೆಕ್ಲೆಸ್, 15 ಗ್ರಾಂ ತೂಕದ ಚಿನ್ನದ ಒಂದು ಜೊತೆ ಕಿವಿಯೊಲೆ, 3.5 ಗ್ರಾಂ ತೂಕದ ಚಿನ್ನದ ಒಂದು ಜೊತೆ ಕಿವಿಯೊಲೆ, 250 ಗ್ರಾಂ ತೂಕದ ಬೆಳ್ಳಿಯ ಒಂದು ಜೊತೆ ಕಾಲು ಚೈನ್, 100 ಗ್ರಾಂ ತೂಕದ ಬೆಳ್ಳಿಯ ಸೊಂಟದ ಕೀ ಚೈನ್, 10 ಗ್ರಾಂ ತೂಕದ ಬೆಳ್ಳಿಯ ಕೊರಳ ಚೈನ್ ಮತ್ತು 1 ಲಕ್ಷ ರೂ. ದೋಚಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248